**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**
**ತಿ. ನರಸೀಪುರ**

**ಸಿ ಸಿ ಸಂಖ್ಯೆ: 469/2024**

**ಆಪಾದನೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

ಕಾರ್ತಿಕ್ ಕುಮಾರ್ ಬಿನ್ ಲೇ ರಾಮು ಎಲ್
33 ವರ್ಷ, ಕೆಎಸ್ ಆರ್ ಟಿ ಸಿ ಡಿಪೋ,
ನಂಜನಗೂಡಿನಲ್ಲಿ ಚಾಲಕ,
ವಾಸ : ಮನೆ ಸಂಖ್ಯೆ 17, 4ನೆ ಮುಖ್ಯ ರಸ್ತೆ,
3ನೇ ಹಂತ, ಮೈಸೂರು ನಗರ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ಆಪಾದನೆ ಎನೆಂದರೆ–

ದಿನಾಂಕ 05.08.2024 ರಂದು ಬೆಳಗ್ಗೆ 6.15 ರಿಂದ 6.30 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೊಲೀಸ್ ಠಾಣಾ ಸರಹದ್ದಿನ, ತಿ. ನರಸೀಪುರ ತಾಲ್ಲೂಕಿನ ಆಲಗೂಡು ಗ್ರಾಮದ ಬಳಿ ಇರುವ ಜವರಯ್ಯನ ಜವರ ನಾಯಕ ಜಮೀನಿನ ಮುಂಭಾಗದ ತಿ. ನರಸೀಪುರ – ಕೊಳ್ಳೇಗಾಲ ಮುಖ್ಯ ರಸ್ತೆಯಲ್ಲಿ, ಆರೋಪಿಯಾದ ನೀವು ಕೆ ಎಸ್ ಆರ್ ಟಿ ಸಿ ಬಸ್ ಸಂಖ್ಯೆ ಕೆಎ–10–ಎಫ್–0485 ನ್ನು ಕೊಳ್ಳೇಗಾಲ ಕಡೆಯಿಂದ ಅತೀ ವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿ ರಸ್ತೆಯ ಎಡಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದ ಮಹದೇವಸ್ವಾಮಿ ರವರಿಗೆ ಢಿಕ್ಕಿ ಮಾಡಿ ಅವರ ತಲೆ ಮತ್ತು ಕೈ ಕಾಲುಗಳಿಗೆ ತೀವ್ರ ಸ್ವರೂಪದ ಗಾಯ ಪಡಿಸಿ ಅವರ ಮರಣವುಂಟು ಮಾಡುವ ಮೂಲಕ ಭಾರತೀಯ ನ್ಯಾಯಾ ಸಂಹಿತೆ ಕಲಂ.281 ಮತ್ತು 106 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು.

ಪ್ರಶ್ನೆಃ ನೀವು ಸದರಿ ಆಪಾದನೆಯನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ಆಪಾದನೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 29.09.2025.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ.ನರಸೀಪುರ.